## 8. ಅಂತರ್ಜಲ ವೃದ್ಧಿಗಾಗಿ ಇಂಗುಗುಂಡಿಗಳ ಪರ್ವ

ಕೋವಿಡ್ 19 ಲಾಕ್‌ಡೌನ್‌ನಿಂದಾಗಿ ಅನೇಕ ಬಡವರು, ಕೂಲಿಕಾರ್ಮಿಕರ ಬದುಕು ಹೈರಾಣಾಗಿತ್ತು. ದಿನದ ಅನ್ನಕ್ಕಾಗಿ ಪರದಾಡುವ ಸ್ಥಿತಿ ತಲುಪಿತ್ತು. ಆದರೆ ಅದಕ್ಕೊಂದು ಹೊಸ ಚೈತನ್ಯ ಬಂದಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಉದ್ಯೋಗ ಸಿಗುತ್ತಿದ್ದು, ಹಣ ದುಡಿದವರ ಅಕೌಂಟಿಗೆ ಬರುತ್ತಿದೆ. ಕೆಲಸ, ಹೊಟ್ಟೆ ಎರಡೂ ಸಾಧ್ಯವಾಗಿದ್ದು, ಬಡವರು, ಕೂಲಿಕಾರರು ಹಾಗೂ ವಲಸಿಗರಿಗೆ ಇದು ವರದಾನವಾಗಿದೆ.

ಪಶ್ಚಿಮಘಟ್ಟ ಪ್ರದೇಶಗಳನ್ನೊಂಡ ಉತ್ತರ ಕನ್ನಡ ಜಿಲ್ಲೆಯು ಶೇಕಡ 80 ಅರಣ್ಯ ಪ್ರದೇಶವನ್ನು ಹೊಂದಿದ್ದು, ಈ ಹಿಂದೆ ಮಳೆ ನಾಡಾಗಿ ಹೆಸರಾಗಿದ್ದರೂ ಇತ್ತೀಚಿನ ವರ್ಷಗಳಲ್ಲಿ ಮಳೆ ಪ್ರಮಾಣ ಕಡಿಮೆಯಾಗಿ ಸಾಕಷ್ಟು ನೀರಿನ ಅಭಾವ ಎದುರಿಸುವಂತಾಗಿತ್ತು. ಆ ಕಾರಣಕ್ಕಾಗಿ ಪ್ರಧಾನ ಮಂತ್ರಿ ಮನ್ರೇಗಾ ಯೋಜನೆಯಡಿಯಲ್ಲಿ ಕೋವಿಡ್ ಲಾಕ್‌ಡೌನ್ ವೇಳೆಯಲ್ಲಿ ಕೂಲಿಕಾರರು, ಬಡವರಿಗೆ ಅನುಕೂಲ ಕಲ್ಪಿಸಿ, ಅಂತರ್ಜಲ ಮಟ್ಟ ಹೆಚ್ಚಿಸಿ, ಭೂಮಿ ಫಸಲನ್ನು ಹಸಿರಾಗಿಸಿ ಎಲ್ಲರ ಬದುಕು ಹಸನಾಗಿಸುವ ಉದ್ದೇಶದಿಂದ ಕೆರೆಗಳ ಕಾಮಗಾರಿ ಹಾಗೂ ಅರಣ್ಯದಲ್ಲಿ ಇಂಗು ಗುಂಡಿ ನಿರ್ಮಾಣದ ಕಾಮಗಾರಿ ಆರಂಭಿಸಿದೆ.

ಸಿದ್ದಾಪುರ, ಶಿರಸಿ, ಯಲ್ಲಾಪುರ, ಮುಂಡಗೋಡ, ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕುಗಳು ಹೆಚ್ಚು ಕೃಷಿ ಭೂಮಿ ಹಾಗೂ ಅರಣ್ಯ ಪ್ರದೇಶವನ್ನು ಹೊಂದಿದ್ದು, ಪ್ರಧಾನ ಮಂತ್ರಿ ಮಹತ್ವಾಕಾಂಕ್ಷಿ ಯೋಜನೆಯಲ್ಲೊಂದಾದ ಮನ್ರೇಗಾ ಯೋಜನೆಯಡಿ ಕೆರೆ ಹೂಳೆತ್ತುವುದು ಮತ್ತು ಅರಣ್ಯದಲ್ಲಿ ಇಂಗು ಗುಂಡಿ ನಿರ್ಮಾಣ ಕಾಮಗಾರಿ ಆರಂಭವಾಗಿದೆ. ಪ್ರತಿ ತಾಲ್ಲೂಕಿನ ಪ್ರತಿ ಪಂಚಾಯಿತಿಯಲ್ಲಿಯೂ ಸಾವಿರಾರು ಸಂಖ್ಯೆಯಲ್ಲಿ ಬಡವರು, ಕೂಲಿ ಕಾರ್ಮಿಕರು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ. ರಾಜ್ಯದಾದ್ಯಂತ ಈ ಯೋಜನೆ ಚಾಲನೆಯಲ್ಲಿದ್ದು, ಉತ್ತರ ಕನ್ನಡ ಜಿಲ್ಲೆ ಕೆಲಸ ಸಾಧಿಸುವಲ್ಲಿ ನಾಲ್ಕನೇ ಸ್ಥಾನ ಪಡೆದುಕೊಂಡಿದೆ. ಅಂತೆಯೇ ಜಿಲ್ಲೆಯಲ್ಲಿಯೇ ಹಳಿಯಾಳ ತಾಲ್ಲೂಕು ಪ್ರಥಮ ಸ್ಥಾನ ಪಡೆದುಕೊಂಡಿದ್ದು, ಸಾವಿರಾರು ಬಡ ಕಾರ್ಮಿಕರ ಜೀವನ ಹಸನಾಗಿದೆ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:06.06.2020